**ದಿನಾಂಕ 17.06.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಶ್ರೀ ಬಿ ಸಿ ಕೆ ವಾದಿಯ ಪರ ವಕೀಲರಿಂದಃ-**

ನನ್ನ ಮುಖ್ಯ **ವಿಚಾರಣೆಯ ಭಾಗವಾಗಿ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು, ಅದರಲ್ಲಿರುವ ಸಂಗತಿಗಳು ನಿಜ ಇರುತ್ತವೆ. ಅವು ನನ್ನ ಮಾಹಿತಿ ಪ್ರಕಾರ ಇರುತ್ತವೆ. ಅವುಗಳನ್ನು ನಾನೇ ಹೇಳಿ ಬರೆಸಿರುತ್ತೇನೆ.**

ಈ ಪ್ರಕರಣದಲ್ಲಿ ನಾನು ದಿಃ 31.12.1999 ರ ನೊಂದಾಯಿತ ಖರೀದಿ ಪತ್ರವನ್ನು ಹಾಜರುಪಡಿಸಿದ್ದು ನಿಪಿ 1 ಎಂದು, ಉಪ ವಿಭಾಗಾಧಿಕಾರಿ ಅವರ ಆದೇಶದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 2 ಎಂದು, ಉಪ ವಿಭಾಗಾಧಿಕಾರಿಗಳ ಮುಂದೆ ದಾಖಲಿಸಿರುವ ಮೇಲ್ಮನವಿ ಪ್ರತಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 3 ಎಂದು, ಇ ಸಿ ಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ 4 ಎಂದು, ದಾವಾ ಆಸ್ತಿಗೆ ಸಂಬಂದಿಸಿದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 5 ರಿಂದ 11 ಎಂದು, ತಹಶೀಲ್ದಾರ್ ರವರ ಹಿಂಬರವನ್ನು ನಿಪಿ 12 ಎಂದು, ಹಕ್ಕು ದಾಖಲೆ ಪ್ರತಿಯನ್ನು ನಿಪಿ 13 ಎಂದು, ದಾವಾ ಆಸ್ತಿಯ ಪಹಣಿ ಪತ್ರಿಕೆಗಳನ್ನು ನಿಪಿ 14 ರಿಂದ 20 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರಿದ ದಾಖಲೆಗಳನ್ನು ಹಾಜರುಪಡಿಸಲು ಸಮಯಾವಕಾಶ ಕೋರಿದ್ದು ನೀಡಲಾಯಿತು.

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು,**
**ತಿ.ನರಸೀಪುರ.**